## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ

ನಂ. 09, 2ನೇ ಮಹಡಿ, 1ನೇ ಮುಖ್ಯರಸ್ತೆ, (ಹೊರವರ್ತುಲ ರಸ್ತೆ),ಕೆಂಗೇರಿ ಉಪನಗರ,ಬೆಂಗಳೂರು-60.

ಸಂಖ್ಯೆ : ಸ.ಇಂ/ವಾ-130/ವಾರ್ಡ್‌ಸಭೆ/2020-21 ದಿನಾಂಕ :16/01/2021

### ವಾರ್ಡ್-130ರ ವಾರ್ಡ್ ಸಭೆಯ ನಡವಳಿ.

**ದಿನಾಂಕ: 16/01/2021 ರಂದು ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿಯ ನಡುವಳಿಗಳು**

**ಸಭೆಯಲ್ಲಿ ಹಾಜರಿದ್ದ ಅಧಿಕಾರಿ ನೌಕರರು ಮತ್ತು ಸದಸ್ಯರುಗಳು:**

| ಕ್ರ ಸಂ | ಸದಸ್ಯರ ಹೆಸರು/ಪದನಾಮ | ಪದನಾಮ |
|---|---|---|
| 1 | ಶ್ರೀ ಮುತ್ತುರಾಜ್ | ಮುಖ್ಯ ಲೆಕ್ಕ ಪರಿಶೋಧನಾಧಿಕಾರಿಗಳು ನೋಡಲ್ ಅಧಿಕಾರಿ |
| 2 | ಶ್ರೀ ಕೆ.ಎಂ. ಯಧುಕೃಷ್ಣ | ಸಹಾಯಕ ಇಂಜಿನಿಯರ್ ವಾರ್ಡ್-130 ಹಾಗೂ ಸದಸ್ಯ ಕಾರ್ಯದರ್ಶಿ |
| 3 | ಶ್ರೀಮತಿ ಪೂರ್ಣಿಮ ಜಿ.ಬಿ | ಸಹಾಯಕ ಕಾರ್ಯಪಾಲಕ ಇಣಜಿನಿಯರ್, ಘನತ್ಯಾಜ್ಯ ನಿರ್ವಹಣೆ, ಕೆಂಗೇರಿ(ವಿ) |
| 4 | ಶ್ರೀಮತಿ ರೂಪ.ಎಂ | ಸಹಾಯಕ ಅಭಿಯಂತರರು(ವಿದ್ಯುತ್) ರಾಜರಾಜೇಶ್ವರಿನಗರ ವಲಯ |
| 5 | ಡಾ|| ಅನುಪಮ | ಪ್ರಾಥಮಿಕ ಆರೋಗ್ಯ ಕೇಂದ್ರ, ಉಲ್ಲಾಳ |
| 6 | ವಾರ್ಡ್ ಕಮಿಟಿ ಸದಸ್ಯರುಗಳು | ವಾರ್ಡ್-130 |

ವಾರ್ಡ್ ನಂ.130 ಉಲ್ಲಾಳ ವಾರ್ಡ್‌ನ ಸಹಾಯಕ ಇಂಜಿನಿಯರ್ ಹಾಗೂ ಸದಸ್ಯ ಕಾರ್ಯದರ್ಶಿಯವರು ಸಭೆಯಲ್ಲಿ ಹಾಜರಿದ್ದ ಅಧಿಕಾರಿ ನೌಕರರು ಮತ್ತು ವಾರ್ಡ್ ಕಮಿಟಿ ಸದಸ್ಯರನ್ನು ಸ್ವಾಗತಿಸಿದರು.

Scanned with CamScanner

ನೋಡಲ್ ಅಧಿಕಾರಿಗಳು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ವಾರ್ಡಿನ ವ್ಯಾಪ್ತಿಯಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸಭೆಯಲ್ಲಿ ಹಾಜರಿದ್ದ ನೌಕರರು ಮತ್ತು ವಾರ್ಡ್ ಕಮಿಟಿ ಸದಸ್ಯರುಗಳಿಂದ ಮಾಹಿತಿ ಪಡೆದರು.

ಸಭೆಯಲ್ಲಿ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಅಗತ್ಯ ಪರಿಹಾರ ಕ್ರಮಗಳನ್ನು ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಸೂಚಿಸಿದರು.

1) ವಾರ್ಡ್ ವ್ಯಾಪ್ತಿಯಲ್ಲಿ ಕಾವೇರಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಸೂಚಿಸಲಾಯಿತು (ಕ್ರಮ:– ಸಹಾಯಕ ಇಂಜಿನಿಯರ್, ಬಿ.ಡಬ್ಲ್ಯೂ.ಎಸ್.ಎಸ್.ಬಿ).

2) **ಐ. ಮಾಸ್ಟ್ ಲೈಟ್ಸ್‌ಗಳನ್ನು** ಉಲ್ಲಾಳ ಉಪನಗರದಲ್ಲಿ ತಕ್ಷಣ ಬದಲಾಯಿಸಿ ಸುಸ್ಥಿತಿಯಲ್ಲಿಡಲು ಉಲ್ಲಾಳ ವಾರ್ಡ್ ವ್ಯಾಪ್ತಿಯಲ್ಲಿ ದುರಸ್ಥಿಯಲ್ಲಿರುವ High Mast Lightಗಳನ್ನು ರಿಪೇರಿ ಮಾಡಲು ಕೋರಿರುತ್ತಾರೆ. ಸಹಾಯಕ ಕಾರ್ಯಪಾಲಕ ಅಭಿಯಂತರರಾದ ರಮೇಶ್‌ರವರನ್ನು ಮುಂದಿನ ಸಭೆಗೆ ಹಾಜರಾಗಲು ತಿಳಿಸುತ್ತಾ ವಾರ್ಡ್‌ನಲ್ಲಿರುವ ಸಮಸ್ಯೆಗಳನ್ನು ಬಗೆಹರಿಸಲು ತಿಳಿಸಲಾಗಿರುತ್ತದೆ.

3) **ಘನತ್ಯಾಜ್ಯ ನಿರ್ವಹಣೆ:–** ಉಲ್ಲಾಳ ವಾರ್ಡ್ ವ್ಯಾಪ್ತಿಯಲ್ಲಿ ಕೆರೆ ಒತ್ತುವರಿ ಮಾಡಿಕೊಂಡು ಅನಧಿಕೃತವಾಗಿ ಕಟ್ಟಡ ನಿರ್ಮಿಸಿಕೊಂಡು ಕೆರೆಯ ಜಾಗವನ್ನು ಅನಧಿಕೃತವಾಗಿ ಭೂಕಬಳಿಕೆ ಮಾಡಿಕೊಂಡಿರುವುದಾಗಿ ಶ್ರೀಯುತ ಕದರಯ್ಯರವರು ತಿಳಿಸಿರುತ್ತಾರೆ. ಆದುದರಿಂದ ಕೆರೆಯ ಉಸ್ತುವಾರಿ ಅಧಿಕಾರಿಗಳಿಗೆ ಪತ್ರರವಾನಿಸಿ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಲಾಗಿರುತ್ತದೆ (ಕ್ರಮ:– ಹಿರಿಯ ಆರೋಗ್ಯ ಪರಿವೀಕ್ಷರು, ಘ.ತ್ಯಾ.ನಿ).

ಜ್ಞಾನಭಾರತಿ ಬಡಾವಣೆಯಲ್ಲಿ ಕಸ ನಿರ್ವಹಣೆ ಸರಿಯಾಗಿ ನಿರ್ವಹಿಸಲು ನೋಡಲ್ ಅಧಿಕಾರಿಯವರು ತಿಳಿಸಿ ಆದೇಶ ನೀಡಿರುತ್ತಾರೆ.

4) ದೇವರಾಜು ಅರಸ್ ಬಡಾವಣೆ, ಜಗಜ್ಯೋತಿ ಬಡಾವಣೆ, ನಾಗದೇವನಹಳ್ಳಿ, ರಾಜು ಬಡಾವಣೆ, ಶಿವು ಬಡಾವಣೆ, ಮರಿಯಪ್ಪನಪಾಳ್ಯ, ಶಿವನಪಾಳ್ಯ, ಸುಭಾಶ್‌ನಗರ, ಜ್ಞಾನಭಾರತಿ 2ನೇ ಬ್ಲಾಕ್, ವಳಗೇರಹಳ್ಳಿ, ಶಾಂತವಿಲಾಸ ಬಡಾವಣೆ, ನಗೆಮನೆ ಬಡಾವಣೆಗಳಲ್ಲಿ ಕೊಳವೆ ಬಾವಿಗಳನ್ನು ಕೊರೆದು ಕುಡಿಯುವ ನೀರಿನ ವ್ಯವಸ್ಥೆ ಮಾಡಲು ತಿಳಿಸಲಾಗಿದೆ.

ಕಲ್ಯಾಣಿ ಬಡಾವಣೆಯಲ್ಲಿ ನೀರಿನ ಸಮಸ್ಯೆ ಬಗೆಹರಿಸಲು ಶ್ರೀ ಪ್ರಸನ್ನ ರವರು ಸಭೆಯಲ್ಲಿ ತಿಳಿಸಿದರು. ಭೈರವ ನಗರದಲ್ಲಿ ನೀರು ಸರಬರಾಜು ಆಗುತ್ತಿಲ್ಲವೆಂದು ಸಭೆಯಲ್ಲಿ ಹಾಜರಿದ್ದ ಸದಸ್ಯರು ತಿಳಿಸಿರುತ್ತಾರೆ (ಕ್ರಮ:– ವಾರ್ಡ್ ಇಂಜಿನಿಯರ್).

**ಮುಂದಿನ ಸಭೆಗೆ ರೆವೆನ್ಯೂ ಅಧಿಕಾರಿಗಳನ್ನು ಆಹ್ವಾನಿಸಲು ಕಾಮಗಾರಿಗಳ** ವಿವರ:– 1) ಉಲ್ಲಾಳ ಉಪನಗರದಲ್ಲಿ ಚರಂಡಿ ನಿರ್ಮಾಣ ಹಾಗೂ ಗಟ್ಟಿಕಲ್ಲು ಕತ್ತರಿಸಿ ಎಂದು ಶ್ರೀ ಅನಿಲ್ ಕುಮಾರ್ ರವರು ಸಭೆಗೆ ತಿಳಿಸಿದರು. 2) ಅನ್ನಪೂರ್ಣೇಶ್ವರಿ ನಗರದ 3ನೇ ಅಡ್ಡರಸ್ತೆಗೆ ಸಿ.ಸಿ. ರಸ್ತೆ

Scanned with CamScanner

(ಆರ್ಚ್ ರೋಡ್) ಹಾಕಿಸಲು ಮನವಿ ಮಾಡಿದರು 3) ಜ್ಞಾನಭಾರತಿ 1ನೇ ಬ್ಲಾಕ್‌ನಲ್ಲಿ ರಸ್ತೆಗೆ ಡಾಂಬರೀಕರಣ ಮಾಡಿಸಬೇಕೆಂದು ಸಭೆಯಲ್ಲಿ ಕೋರಲಾಯಿತು. 4)ಗಾನವೃದ್ಧಿ ಅಪಾರ್ಟ್‌ಮೆಂಟ್– ಉಪಾಧ್ಯಾಯ ಬಡಾವಣೆ 50 ಮೀಟರ್ ಉದ್ದಕ್ಕೆ ಸ್ಲ್ಯಾಬ್ ಅಳವಡಿಸಲು ಸಭೆಯಲ್ಲಿ ಕೋರಿದರು. 5) ಆರ್.ಆರ್. ಲೇಔಟ್–ಗೇಟ್‌ನ್ನು ದುರಸ್ಥಿ ಮಾಡಸಬೇಕೆಂದು ಸಭೆಯಲ್ಲಿ ಕೋರಲಾಯಿತು. 6) ಜ್ಞಾನ ಗಣಪತಿ ದೇವಸ್ಥಾನದ ಹಿಂಭಾಗದಲ್ಲಿರುವ ಸೋಲಾರ್ ವಿದ್ಯುತ್ ದೀಪವನ್ನು ರಿಪೇರಿ ಮಾಡಲು ಸಭೆಯಲ್ಲಿ ಕೋರಲಾಯಿತು (ಕ್ರಮ:– ವಾರ್ಡ್ ಇಂಜಿನಿಯರ್).

5) ವಾರ್ಡ್ ವ್ಯಾಪ್ತಿಯಲ್ಲಿ ಪ್ರಗತಿಯಲ್ಲಿರುವ ಕಾಮಗಾರಿಗಳ ಗುಣಮಟ್ಟ ಕಾಯ್ದುಕೊಂಡು ಕೆಲಸ ನಿರ್ವಹಿಸಲು ಸೂಚಿಸುತ್ತಾ, ವಾರ್ಡ್ ವ್ಯಾಪ್ತಿಯಲ್ಲಿರುವ ರಸ್ತೆಗಳಲ್ಲಿ ಗುಂಡಿ ಮುಚ್ಚಲು ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಯಿತು. ವಾರ್ಡ್ ವ್ಯಾಪ್ತಿಯಲ್ಲಿ ಹಾಲಿ ಪ್ರಗತಿಯಲ್ಲಿರುವ ಕಾಮಗಾರಿಗಳ ವಿವರ ಈ ಹಿಂದೆ ಅಭಿವೃದ್ಧಿಪಡಿಸಿರುವ ಬಡಾವಣೆಗಳಲ್ಲಿ ನಿರ್ವಹಿಸಿರುವ ಕಾಮಗಾರಿಗಳ ವಿವರಗಳನ್ನು ಸಭೆಗೆ ತಿಳಿಸಿದರು.

ಮುಂದುವರೆದು ವಾರ್ಡ್ ವ್ಯಾಪ್ತಿಯಲ್ಲಿ ವಿವಿಧ ಬಡಾವಣೆಗಳಲ್ಲಿ ಯಾವುದಾದರೂ ಕಾಮಗಾರಿ ಅವಶ್ಯಕತೆ ಇದ್ದಲ್ಲಿ ತಿಳಿಸುವಂತೆ ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳಿಗೆ ತಿಳಿಸಲಾಯಿತು. (ಕ್ರಮ:– ವಾರ್ಡ್ ಇಂಜಿನಿಯರ್).

6) ನೋಡಲ್ ಅಧಿಕಾರಿಗಳು ಸಭೆಯಲ್ಲಿದ್ದ ಎಲ್ಲಾ ಸದಸ್ಯರುಗಳನ್ನು ಉದ್ದೇಶಿಸಿ ತಿಳಿಸುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಶೌಚಾಲಯಗಳ ಅವಶ್ಯಕತೆ ಮತ್ತು ಸ್ಥಳ ಹಾಗೂ ಪಾದಾಚಾರಿ ಮಾರ್ಗಗಳ ಅಭಿವೃದ್ಧಿ, ಹೊಸ ಪಾದಾಚಾರಿ ಮಾರ್ಗಗಳ ಅವಶ್ಯಕತೆ ಬಗ್ಗೆ ವಿವರಗಳನ್ನು ಸಭೆಗೆ ಒದಗಿಸುವಂತೆ ತಿಳಿಸಿದರು. ವಿವರಗಳನ್ನು ಪಡೆದು ಕ್ರೋಢೀಕರಿಸಲು ಸದಸ್ಯ ಕಾರ್ಯದರ್ಶಿಗಳಿಗೆ ಸೂಚಿಸಿದರು (ಕ್ರಮ:– ಸಹಾಯಕ ಇಂಜಿನಿಯರ್).

7) ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಾರ್ಡ್ ವ್ಯಾಪ್ತಿಯಲ್ಲಿ ಅರ್ಹ ಫಲಾನುಭವಿಗಳಿಗೆ ನಿವೇಶನ ಹಕ್ಕುಪತ್ರಗಳನ್ನು ವಿತರಿಸಲು ಅಗತ್ಯ ಕ್ರಮವಹಿಸುವಂತೆ ಮತ್ತೊಮ್ಮೆ ತಿಳಿಸಲಾಯಿತು (ಕ್ರಮ:– ಕಂದಾಯ ಇಲಾಖೆ).

ಅಂತಿಮವಾಗಿ ವಾರ್ಡ್‌ನ ಎಲ್ಲಾ ವಾರ್ಡ್ ಕಮಿಟಿಯ ಸದಸ್ಯರಗಳ ಮತ್ತು ವಿವಿಧ ಸಂಘ ಸಂಸ್ಥೆಗಳು ಜೊತೆಗೂಡಿ ಸಮನ್ವಯ ಸಾಧಿಸಿ ಕುಂದು ಕೊರತೆಗಳನ್ನು ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಎಲ್ಲಾ ಅಧಿಕಾರಿ ವರ್ಗದವವರಿಗೆ ಸೂಚಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

K.M. [signature]

[signature]
(ಮುತ್ತುರಾಜ್)
ಮುಖ್ಯ ಲೆಕ್ಕ ಪರಿಶೋಧನಾಧಿಕಾರಿಗಳು
ಹಾಗೂ ನೋಡಲ್ ಅಧಿಕಾರಿ,
ವಾರ್ಡ್‌ನಂ.130, ಉಲ್ಲಾಳ
ಕೆಂಗೇರಿ ಉಪ ವಿಭಾಗ
ಬಿ.ಬಿ.ಎಂ.ಪಿ.,ಬೆಂಗಳೂರು.

Scanned with CamScanner

ಪ್ರತಿಯನ್ನು:

1) ವಲಯ ಆಯುಕ್ತರು ಹಾಗೂ ವಿಶೇಷ ಆಯುಕ್ತರು(ಆಡಳಿತ) ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ತರಲು ಅವರ ಆಪ್ತ ಸಹಾಯಕರಿಗೆ ಸಲ್ಲಿಸಿದೆ.
2) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯ ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯ ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು, ಕೆಂಗೇರಿ ವಿಭಾಗ ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆಂ.ಉ.ವಿ/ ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ(ಯಶವಂತಪುರ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಎಲ್ಲಾ ವಾರ್ಡ್ ಕಮಿಟಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
7) ಕಛೇರಿ ಪ್ರತಿ

Scanned with CamScanner